ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 2/1/2021

# ಅಧಿಕಾರಿಗಳ ಜತೆ ಸಿಎಂ ಸಭೆ

ಬೆಂಗಳೂರು: ಬಜೆಟ್ ಕಾರ್ಯಕ್ರಮಗಳನ್ನು ಮಾರ್ಚ್ ಒಳಗೆ ಸಂಪೂರ್ಣ ಅನುಷ್ಠಾನವಾಗುವಂತೆ ನೋಡಿಕೊಳ್ಳಿ. ಸ್ಮಾರ್ಟ್ ಸಿಟಿ, ಬೆಂಗಳೂರು ಮಿಷನ್ -2022 ಬಗ್ಗೆ ಹೆಚ್ಚು ಕಾಳಜಿ ವಹಿಸಿ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚನೆ ನೀಡಿದ್ದಾರೆ.



ನಗರದ ಹೊರವಲಯದ ರೆಸಾರ್ಟ್‌ನಲ್ಲಿ ಹೊಸ ವರ್ಷದ ಮೊದಲ ದಿನ ನೂತನ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ಸೇರಿದಂತೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಇಲಾಖಾ ಪ್ರಧಾನ. ಕಾರ್ಯದರ್ಶಿಗಳ ಜತೆ ಚರ್ಚಿಸಿ, ಆರ್ಥಿಕ ಇತಿಮಿತಿಯಲ್ಲಿ ಯೋಜನೆಗಳ ಜಾರಿಗೆ ಗಮನಹರಿಸಿ ಎಂದು ಹೇಳಿದರು.

ಕಳೆದ ಬಜೆಟ್‌ನಲ್ಲಿ ಇಲಾಖಾವಾರು ನಿಗದಿಪಡಿಸಿದ ಅನುದಾನ, ಯೋಜನೆಗಳ ಅನುಷ್ಠಾನ ಮತ್ತು ಅನುದಾನ ಬಳಕೆ, ಉಳಿದಿರುವ ಅನುದಾನದ ಮಾಹಿತಿ ಸಂಗ್ರಹಿಸಿ ಮುಂದಿನ ಬಜೆಟ್‌ನಲ್ಲಿ ರೂಪಿಸಬೇಕಾದ ಯೋಜನೆಗಳ ಬಗ್ಗೆ ಪ್ರಸ್ತಾವನೆ ಸಿದ್ಧಪಡಿಸಿ ಎಂದು ನಿರ್ದೇಶನ ನೀಡಿದರು.

ಮುಂದಿನ ಬಜೆಟ್‌ನಲ್ಲಿ ಅಭಿವೃದ್ಧಿ ಚಟುವಟಿಕೆಗಳಿಗೆ ಒತ್ತು ನೀಡಲು ಯೋಜಿಸಿರುವ ಹಿನ್ನಲೆಯಲ್ಲಿ ಇಲಾಖಾವಾರು ರೂಪಿಸಬಹುದಾದ ಜನಪರ ಯೋಜನೆಗಳ ನೀಲನಕ್ಷೆ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚನೆ ನೀಡಿದರು. ಮಾದರಿ ರಾಜ್ಯವನ್ನಾಗಿಸುವ ನಿಟ್ಟಿನಲ್ಲಿ ಅಧಿಕಾರಿಗಳ ತಂಡ ಕೆಲಸ ಮಾಡಲಿದೆ ಎಂದು ಸರ್ಕಾರದ ನೂತನ ಮುಖ್ಯ ಕಾರ್ಯದರ್ಶಿ ಪಿ.ರವಿಕುಮಾರ್ ಮುಖ್ಯಮಂತ್ರಿಯವರಿಗೆ ಈ ಸಂದರ್ಭದಲ್ಲಿ ಭರವಸೆ ನೀಡಿದರು.

**ಸಚಿವ ಸಂಪುಟ ವಿಸ್ತರಣೆ ಸಂಬಂಧ ಅರುಣ್ ಸಿಂಗ್ ಅವರ ಜತೆ ಶನಿವಾರ ಮಾತುಕತೆ ನಡೆಸಲಾಗುವುದು. ಅಧಿಕಾರಿಗಳ ಜತೆ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡುವ ಸಂಬಂಧ ಚರ್ಚಿಸಿದ್ದೇವೆ. ಬಜೆಟ್ ಸಿದ್ಧತೆ, ಕಳೆದ ಬಜೆಟ್‌ನ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆಯೂ ಚರ್ಚಿಸಲಾಗಿದೆ.**

**• ಬಿ.ಎಸ್.ಯಡಿಯೂರಪ್ಪ,**
ಸಿಎಂ